# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:** | **865 (1112)** |
| **ಸದಸ್ಯರ ಹೆಸರು:** | ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ (ವಿಧಾನ ಸಭೆಯಿಂದ ಚುನಾಯಿತರಾದವರು) |
| **ಉತ್ತರಿಸಬೇಕಾದ ಸಚಿವರು** | ಮಾನ್ಯ ಕಂದಾಯ ಸಚಿವರು |
| **ಉತ್ತರಿಸಬೇಕಾದ ದಿನಾಂಕ:** | 28.12.2022 |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯಾದ್ಯಂತ ಕಂದಾಯ ನ್ಯಾಯಾಲಯದಲ್ಲಿ ಬಾಕಿ ಇರುವ ಪ್ರಕರಣಗಳನ್ನು ಶೀಘ್ರ ವಿಲೇವಾರಿ ಮಾಡಲು ಸರ್ಕಾರ ಕೈಗೊಂಡ ಕ್ರಮವೇನು; | ಕಂದಾಯ ನ್ಯಾಯಾಲಯಗಳಲ್ಲಿ ಬಾಕಿ ಇರುವ ಪ್ರಕರಣಗಳನ್ನು ಶೀಘ್ರ ವಿಲೇವಾರಿ ಮಾಡಲು ಸರ್ಕಾರದ ಸುತ್ತೋಲೆ ಸಂಖ್ಯೆ: ಕಂಇ 193 ಟಿ ಆರ್‌ಎಂ 2019, ದಿನಾಂಕ:18.02.2021 ಮತ್ತು ಸುತ್ತೋಲೆ ಸಂಖ್ಯೆ: ಕಂಇ 17 ಟಿ ಆರ್‌ಎಂ 2021, ದಿನಾಂಕ:22.02.2021ರ ಸೂಚನೆಯಂತೆ ಪ್ರಕರಣಗಳನ್ನು ಇತ್ಯರ್ಥಪಡಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.<br><br>ಮುಂದುವರೆದು, ಜಿಲ್ಲಾಧಿಕಾರಿಗಳ ನ್ಯಾಯಾಲಯದಲ್ಲಿ ಪ್ರತಿ ಮಾಹೆ 50 ಪ್ರಕರಣಗಳು ಹಾಗೂ ಉಪವಿಭಾಗಾಧಿಕಾರಿಗಳ ನ್ಯಾಯಾಲಯ ಮತ್ತು ತಹಶೀಲ್ದಾರ್ ರವರ ನ್ಯಾಯಾಲಯದಲ್ಲಿ ಮಾಸಿಕವಾಗಿ ತಲಾ 100 ಪ್ರಕರಣಗಳನ್ನು ಇತ್ಯರ್ಥಪಡಿಸಲು ಸೂಚಿಸಿದ್ದರ ಮೇರೆಗೆ ವಾರದಲ್ಲಿ 2 ದಿನ ಕಂದಾಯ ನ್ಯಾಯಾಲಯಗಳ ವಿಚಾರಣೆ ನಡೆಸಿ, ಪ್ರಕರಣಗಳನ್ನು ಇತ್ಯರ್ಥಪಡಿಸಲು ಕ್ರಮವಹಿಸಲಾಗುತ್ತಿದೆ.<br><br>ಸರ್ಕಾರದ ಆದೇಶ ಸಂಖ್ಯೆ: ಕಂಇ 182 ಎಎಸ್‌ಡಿ 2022, ದಿನಾಂಕ:07.06.2022ರ ಆದೇಶದಲ್ಲಿ ನಮೂದಿಸಿರುವ ಜಿಲ್ಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಪರ ಜಿಲ್ಲಾಧಿಕಾರಿಗಳನ್ನು ಕರ್ನಾಟಕ ಭೂ ಕಂದಾಯ ಕಾಯ್ದೆ 1964ರ ಕಲಂ 136 (3) ರಡಿಯಲ್ಲಿ ಕೆಲಸ ನಿರ್ಹಿಸಲು ವಿಶೇಷ ಜಿಲ್ಲಾಧಿಕಾರಿಗಳನ್ನಾಗಿ ನೇಮಿಸಿ, ಸದರಿಯವರುಗಳಿಗೆ ಕಂದಾಯ ನ್ಯಾಯಾಲಯದ ಕಲಾಪಗಳನ್ನು ನಿಗಧಿತ ಅವಧಿಯೊಳಗೆ ಇತ್ಯರ್ಥಪಡಿಸಲು ಅಧಿಕಾರ ಪ್ರತ್ಯಾಯೋಜಿಸಿದೆ. |

| | | |
|---|---|---|
| ಆ) | ತಾಲ್ಲೂಕು ಮಟ್ಟದಲ್ಲಿ ತಹಶೀಲ್ದಾರರ ಕೆಲಸ ಕಾರ್ಯಗಳ ಒತ್ತಡ ಹೆಚ್ಚಾಗಿರುವ ಕಾರಣ ಸಾರ್ವಜನಿಕರಿಗೆ ತೊಂದರೆಯಾಗುತ್ತಿದ್ದು, ಅವರುಗಳ ಕರ್ತವ್ಯಗಳನ್ನು ಕಡಿಮೆ ಮಾಡುವುದರಲ್ಲಿ ಸರ್ಕಾರದ ನಿಲುವೇನು; | ತಾಲ್ಲೂಕು ಮಟ್ಟದಲ್ಲಿ ತಹಶೀಲ್ದಾರರ ಕೆಲಸ ಕಾರ್ಯಗಳ ಒತ್ತಡ ಹೆಚ್ಚಾಗಿರುವ ಕಾರಣ ಕಾರ್ಯದೊತ್ತಡವನ್ನು ಕಡಿಮೆ ಮಾಡುವ ನಿಟ್ಟಿನಲ್ಲಿ ಕಸಬಾ ಹೋಬಳಿಗೆ ಸಂಬಂಧಿಸಿದ ಪ್ರಕರಣಗಳನ್ನು ತಹಶೀಲ್ದಾರ್ ಗ್ರೇಡ್-1 ರವರು ಇತ್ಯರ್ಥಪಡಿಸುವಂತೆ ಹಾಗೂ ಉಳಿದ ಹೋಬಳಿಗಳ ಪ್ರಕರಣಗಳನ್ನು ತಹಶೀಲ್ದಾರ್ ಗ್ರೇಡ್-2 ರವರ ಹಾಗೂ ವಿಶೇಷ ತಹಶೀಲ್ದಾರ್‌ರವರು ಇರುವ ಜಿಲ್ಲೆಗಳಲ್ಲಿ ವಿಶೇಷ ತಹಶೀಲ್ದಾರ್‌ರವರು ಇತ್ಯರ್ಥಪಡಿಸುವಂತೆ ಸರ್ಕಾರದ **ಆದೇಶ ಸಂಖ್ಯೆ: ಕಂಇ 141 ಟಿಆರ್‌ಎಂ 2019, ದಿನಾಂಕ:16.07.2019ರಂತೆ** ಕಾರ್ಯಭಾರ ಹಂಚಿಕೆ ಮಾಡಲಾಗಿದೆ.<br><br>**ಸರ್ಕಾರದ ಅಧಿಸೂಚನೆ ಸಂಖ್ಯೆ: ಕಂಇ 86 ಟಿಆರ್‌ಎಂ 2022, ದಿನಾಂಕ:13.04.2022ರ** ಅಧಿಸೂಚನೆಯಲ್ಲಿ ಹಕ್ಕು ಬದಲಾವಣೆಗಳ ಸಂಬಂಧ (ಬಾಕಿ ಇರುವ ಪ್ರಕರಣಗಳು ಸೇರಿ) ತಕರಾರು ಪ್ರಕರಣಗಳನ್ನು ಶೀಘ್ರವಾಗಿ ಇತ್ಯರ್ಥಪಡಿಸುವ ದೃಷ್ಟಿಯಿಂದ ಕಂದಾಯ ಇಲಾಖೆಯ ಹೋಬಳಿಯಲ್ಲಿ ಕಾರ್ಯನಿರ್ವಹಿಸುವ ಉಪತಹಶೀಲ್ದಾರ್ ಹುದ್ದೆಯು ಶಿರಸ್ತೇದಾರ್ ಹುದ್ದೆಗೆ ಸಮಾನಾಂತರವಾಗಿರುವುದರಿಂದ ಸಂಬಂಧಪಟ್ಟ ಹೋಬಳಿಯ ವ್ಯಾಪ್ತಿಯಲ್ಲಿ ಬರುವ ಉಪತಹಶೀಲ್ದಾರ್ ರವರು ತಕರಾರು ಪ್ರಕರಣಗಳನ್ನು ಇತ್ಯರ್ಥಪಡಿಸಲು ಅಧಿಕಾರ ಪ್ರತ್ಯಾಯೋಜಿಸುವ ಮೂಲಕ ತಹಶೀಲ್ದಾರ್‌ರವರ ಕೆಲಸ ಕಾರ್ಯಗಳ ಒತ್ತಡವನ್ನು ಕಡಿಮೆ ಮಾಡಲಾಗಿರುವುದರಿಂದ ಸಾರ್ವಜನಿಕರಿಗೆ ಯಾವುದೇ ತೊಂದರೆ ಉಂಟಾಗುತ್ತಿಲ್ಲ. |
| ಇ) | ತಾಲ್ಲೂಕಿಗೆ ಸಂಬಂಧಿಸಿದ ಭಾಗಶಃ ಕೆಲಸ ಕಾರ್ಯಗಳನ್ನು ತಹಶೀಲ್ದಾರರವರೇ ಮಾಡುತ್ತಿರುವುದರಿಂದ ಸಾರ್ವಜನಿಕರಿಗೆ ಸರಿಯಾದ ಸಮಯದಲ್ಲಿ ಸ್ಪಂದಿಸದೆ ಇರುವುದು ಸರ್ಕಾರದ ಗಮನದಲ್ಲಿ ಇದೆಯೇ? ಇದ್ದಲ್ಲಿ ಈ ಬಗ್ಗೆ ತೆಗೆದುಕೊಳ್ಳುವ ಕ್ರಮವೇನು ? | ತಹಶೀಲ್ದಾರರು ಸಾರ್ವಜನಿಕರಿಗೆ ಸರಿಯಾದ ಸಮಯದಲ್ಲಿ ಸ್ಪಂದಿಸದೇ ಇರುವಂತಹ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ.<br><br>ಎಲ್ಲಾ ತಹಶೀಲ್ದಾರ್ ರವರುಗಳು ಕೇಂದ್ರ ಸ್ಥಾನದಲ್ಲಿ ವಾಸವಿದ್ದು ಹಾಗೂ ಖಾಲಿ ಇರುವ ಹುದ್ದೆಗಳಿಗೆ ಆಡಳಿತಾತ್ಮಕ ಹಿತದೃಷ್ಟಿಯಿಂದ ಪ್ರಭಾರ ವ್ಯವಸ್ಥೆಯನ್ನು ಕಲ್ಪಿಸಿ, ಸಾರ್ವಜನಿಕರ ಸಮಸ್ಯೆಗಳಿಗೆ ಸ್ಪಂದಿಸಿ, ಸಕಾಲದಲ್ಲಿ ಪೂರಕ ಪರಿಹಾರ ನೀಡುವಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ. ಅಲ್ಲದೇ, ಇತ್ತೀಚಿಗೆ ಜಿಲ್ಲಾಧಿಕಾರಿಗಳ ನಡೆ ಹಳ್ಳಿ ಕಡೆ ಕಾರ್ಯಕ್ರಮದಡಿ ಗ್ರಾಮೀಣ ಪ್ರದೇಶದ ಜನರ ಆಶೋತ್ತರಗಳಿಗೆ ಕಂದಾಯ ಇಲಾಖೆಯು ಸ್ಥಳದಲ್ಲಿಯೇ ಸೂಕ್ತ ಕ್ರಮ ಕೈಗೊಂಡು, ಸರ್ಕಾರದ ಸೌಲಭ್ಯಗಳನ್ನು ನಿಗಧಿತ ಅವಧಿಯೊಳಗೆ ಸಾರ್ವಜನಿಕರಿಗೆ ತಲುಪಿಸುವ ವ್ಯವಸ್ಥೆ ಕಲ್ಪಿಸಲು ಕ್ರಮ ಕೈಗೊಂಡಿದೆ. |

ಸಂಖ್ಯೆ: ಕಂಇ **575** ಎಎಸ್‌ಡಿ **2022**

(ಆರ್. ಅಶೋಕ)
ಕಂದಾಯ ಸಚಿವರು